# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 794 (1000)

ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ. ರಾಥೋಡ್
(ನಾಮ ನಿರ್ದೇಶನ ಹೊಂದಿದವರು)

ಉತ್ತರಿಸುವ ದಿನಾಂಕ : 10-03-2021

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರಿನ ನೈಸ್ ರಸ್ತೆಯಲ್ಲಿ ಫಾಸ್ಟ್ ಟ್ಯಾಗ್ ಅಳವಡಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿದೆ. |
| (ಆ) | ಹಾಲಿ ನೈಸ್ ರಸ್ತೆಯಲ್ಲಿ ಪ್ರತಿ ದಿನ ಒಂದು ಲಕ್ಷದಷ್ಟು ವಾಹನಗಳು ಸಂಚರಿಸುತ್ತಿದ್ದು, ಕೋವಿಡ್-19 ಸಂದರ್ಭದಲ್ಲಿ ಹಣದ ವ್ಯವಹಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರಿನ ನೈಸ್ ರಸ್ತೆಯಲ್ಲಿ ವಾಹನಗಳು ಸಂಚರಿಸುತ್ತಿದ್ದು, ಒಂದು ಲಕ್ಷದಷ್ಟು ವಾಹನಗಳು ಸಂಚರಿಸುತ್ತಿರುವ ಬಗ್ಗೆ ನಿಖರವಾದ ಮಾಹಿತಿ ಇರುವುದಿಲ್ಲ. ಹಾಗೂ ಕೋವಿಡ್-19 ಸಂದರ್ಭದಲ್ಲಿ ಹಣದ ವ್ಯವಹಾರ ನಡೆಯುತ್ತಿರುವ ಬಗ್ಗೆ ಈ ಇಲಾಖೆಗೆ ಯಾವುದೇ ದೂರು ಬಂದಿರುವುದಿಲ್ಲ. |
| (ಇ) | ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳಲ್ಲಿ ಫಾಸ್ಟ್ ಟ್ಯಾಗ್ ಕಡ್ಡಾಯಗೊಳಿಸಿದ್ದು, ನೈಸ್ ಫಾಸ್ಟ್ ಟ್ಯಾಗ್ ವ್ಯವಸ್ಥೆಯನ್ನು ಜಾರಿಗೊಳಿಸಲು ಕೂಡಲೇ ಕ್ರಮ ಕೈಗೊಳ್ಳಲಾಗುವುದೇ? | ಸರ್ಕಾರ ಮತ್ತು ನೈಸ್ ಸಂಸ್ಥೆಯೊಂದಿಗೆ ದಿನಾಂಕ 03.04.1997ರ ಕ್ರಿಯಾ ಒಪ್ಪಂದದಲ್ಲಿ ಯೋಜನಾ ಪ್ರವರ್ಥಕ ಸಂಸ್ಥೆಯಾದ ಮೆ: ನೈಸ್ ಸಂಸ್ಥೆಯು ಕಾಂಕ್ರೀಟ್ ರಸ್ತೆ ಮಾಡಿದ ಮೇಲೆ ಟೋಲ್ ಶುಲ್ಕವನ್ನು ಸಂಗ್ರಹಿಸಲು ತಿಳಿಸಲಾಗಿರುತ್ತದೆ. ಆದರೆ ನೈಸ್ ಸಂಸ್ಥೆಯು ಕಾಂಕ್ರೀಟ್ ರಸ್ತೆ ಬದಲಿಗೆ ಡಾಂಬರ್ ರಸ್ತೆಯನ್ನು ನಿರ್ಮಿಸಿ ಕ್ರಿಯಾ ಒಪ್ಪಂದದ ಸೆಕ್ಷನ್ 6.6.3 ನ್ನು ಉಲ್ಲಂಘಿಸಿರುತ್ತದೆ. ಈ ಹಿನ್ನೆಲೆಯಲ್ಲಿ ಕ್ರಿಯಾ ಒಪ್ಪಂದದ ಸೆಕ್ಷನ್ 16.2ರನ್ವಯ ಸರ್ಕಾರದಿಂದ ಡಿಫಾಲ್ಟ್ ನೋಟೀಸ್‌ನ್ನು ದಿನಾಂಕ 5-2-2016ರಂದು ನೈಸ್ ಸಂಸ್ಥೆಗೆ ನೀಡಲಾಗಿದೆ. ಆದರೆ ಸದರಿ ಡಿಫಾಲ್ಟ್ ನೋಟೀಸ್ ವಿರುದ್ಧ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂ. 12109-10/2016 ಅನ್ನು ದಾಖಲಿಸಿ ತಡೆಯಾಜ್ಞೆ ತಂದಿರುತ್ತಾರೆ. ಪ್ರಕರಣ ಮಾನ್ಯ ನ್ಯಾಯಾಲಯದಲ್ಲಿ ಬಾಕಿ ಇದ್ದು, ಪ್ರಕರಣ ಇತ್ಯರ್ಥವಾದ ನಂತರ ಈ ಬಗ್ಗೆ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು. |

ಸಂಖ್ಯೆ: ಲೋಇ 195 ಸಿಆರ್‌ಎಂ 2019

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯ ಮಂತ್ರಿಗಳು ಹಾಗೂ
ಲೋಕೋಪಯೋಗಿ ಸಚಿವರು